ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE 25/6/2020

# ಮುಂಗಾರು ಅಧಿವೇಶನಕ್ಕೆ ಕತ್ತರಿ

25/6/20

**ಸಂ.ಕ. ಸಮಾಚಾರ ಬೆಂಗಳೂರು**

ರಾಜ್ಯದಲ್ಲಿ ಕೊರೊನಾ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವ ಕಾರಣ ಬಹು ನಿರೀಕ್ಷಿತ ಮುಂಗಾರು ಅಧಿವೇಶನ ರದ್ದಾಗುವ ಲಕ್ಷಣಗಳು ಗೋಚರಿಸಿವೆ.

ಜುಲೈ ತಿಂಗಳ ಎರಡನೆ ವಾರದಲ್ಲಿ 10 ದಿನಗಳ ಕಾಲ ಮುಂಗಾರು ಅಧಿವೇಶನ ನಡೆಸುವ ಬಗ್ಗೆ ಗಂಭೀರ ಚಿಂತನೆ ನಡೆಸಿತ್ತು. ಕೊರೊನಾ ಪರಿಸ್ಥಿತಿ ನಿರ್ವಹಣೆ, ರಾಜ್ಯದ ಪ್ರಚಲಿತ ಸಮಸ್ಯೆಗಳ ಬಗ್ಗೆ ಉಭಯ ಸದನಗಳಲ್ಲಿ ಚರ್ಚೆ ನಡೆಸಿ ಅದಕ್ಕೆ ಪರಿಹಾರ ಕ್ರಮಗಳನ್ನು ತೆಗೆದುಕೊಳ್ಳಲು ಉದ್ದೇಶಿಸಲಾಗಿತ್ತು. ಆದರೆ, ಕಳೆದ ಎರಡು ವಾರಗಳಿಂದ ರಾಜ್ಯದಲ್ಲಿ ಕೊರೊನಾ ಮಹಾಮಾರಿ ತನ್ನ ಕಬಂಧಬಾಹುವನ್ನು ವಿಸ್ತರಿಸುತ್ತಲೇ ಇದೆ. ರಾಜಧಾನಿ ಬೆಂಗಳೂರಿನಲ್ಲೇ ಕೊರೊನಾ ಪ್ರಕರಣಗಳು ಭಾರೀ ಪ್ರಮಾಣದಲ್ಲಿ ಏರುಮುಖವಾಗುವುದರ ಜೊತೆಗೆ ಸಾವಿನ ಪ್ರಕರಣಗಳೂ ಕೂಡ ಹೆಚ್ಚಾಗುತ್ತಿರುವುದರಿಂದ ಅಧಿವೇಶನದ ಮೇಲೆ ಕರಿನೆರಳು ಆವರಿಸುವಂತಾಗಿದೆ.

ಕೊರೊನಾ ಹಿನ್ನೆಲೆಯಲ್ಲಿ ವಿಧಾನಸೌಧದಲ್ಲಿ ನಡೆಸಬೇಕಾಗಿದ್ದ ಮುಂಗಾರು ಅಧಿವೇಶನವನ್ನು ಮುಂದೂಡಿ ನವೆಂಬರ್,. ಡಿಸೆಂಬರ್ ತಿಂಗಳ ಮಧ್ಯಭಾಗದಲ್ಲಿ ಬೆಳಗಾವಿಯ ಸುವರ್ಣಸೌಧದಲ್ಲಿ 20 ದಿನಗಳ ಕಾಲ ಅವೇಶನ ನಡೆಸುವ ಚಿಂತನೆ ನಡೆಸಿದೆ ಎಂದು ಸಚಿವಾಲಯದ ಮೂಲಗಳು ತಿಳಿಸಿವೆ.

ಕಳೆದ ಬಾರಿ ಉತ್ತರ ಕರ್ನಾಟಕದಲ್ಲಿ ಭೀಕರ ಪ್ರವಾಹ ಉಂಟಾದ ಪರಿಣಾಮ ಬೆಳಗಾವಿಯ ಸುವರ್ಣಸೌಧದಲ್ಲಿ ಚಳಿಗಾಲದ ಅವೇಶನ ರದ್ದುಪಡಿಸಲಾಗಿತ್ತು. ಈ ವರ್ಷ ಫೆಬ್ರವರಿ ಮಾರ್ಚ್ ತಿಂಗಳಲ್ಲಿ ಅಧಿವೇಶನ ನಡೆಯುತ್ತಿದ್ದ ಸಂದರ್ಭದಲ್ಲೇ ಕೊರೊನಾ ವಕ್ಕರಿಸಿದ್ದರಿಂದ ಅಧಿವೇಶನವನ್ನು ಮೊಟಕು ಮಾಡಲಾಗಿತ್ತು. ನಿಯಮಾವಳಿ ಪ್ರಕಾರ ಒಂದು ಅಧಿವೇಶನಕ್ಕೂ, ಮತ್ತೊಂದು ಅಧಿವೇಶನಕ್ಕೂ ಆರು ತಿಂಗಳ ಅಂತರ ಇರಬಾರದು. ವರ್ಷದಲ್ಲಿ 60 ದಿನ ಸದನ ನಡೆಸಬೇಕು. ಆದರೆ, ಈಗಿನ ಸನ್ನಿವೇಶದಲ್ಲಿ ಅಧಿವೇಶನ ನಡೆಸುವುದು ಸೂಕ್ತವಲ್ಲ ಎಂಬ ನಿರ್ಧಾರಕ್ಕೆ ಬಂದಂತಿದೆ.

ಅಧಿವೇಶನ ನಡೆಸುವ ಬಗ್ಗೆ ಸರ್ಕಾರ ಪ್ರತಿಪಕ್ಷಗಳು ಒಲವು ತೋರಿದ್ದವು. ಆದರೆ, ಅಧಿವೇಶನ ನಡೆಸಿದರೆ ಕೊರೊನಾ ಸೋಂಕು ಯಾರಿಗಾದರೂ ತಗುಲುವ ಸಾಧ್ಯತೆಗಳಿರುವುದರಿಂದ ಈಗಿನ ಮಟ್ಟಿಗೆ ಅಧಿವೇಶನ ನಡೆಸುವುದು ಬೇಡ ಎಂದು ಬಿಜೆಪಿ, ಕಾಂಗ್ರೆಸ್ ಹಾಗೂ ಜೆಡಿಎಸ್‌ನ ಶಾಸಕರು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಗೆ ಮನವಿ ಮಾಡಿದ್ದಾರೆ ಎಂದು ಗೊತ್ತಾಗಿದೆ. ಈ ಹಿನ್ನೆಲೆಯಲ್ಲಿ ಸ್ಪೀಕರ್ ಅವರು ಸರ್ವಪಕ್ಷಗಳ ಮುಖಂಡರನ್ನು ಕರೆದು ಚರ್ಚೆ ಮಾಡಿ ತೀರ್ಮಾನ ತೆಗೆದುಕೊಳ್ಳಲಿದ್ದಾರೆ ಎಂದು ಸಚಿವಾಲಯದ ಮೂಲಗಳು ತಿಳಿಸಿವೆ.

## ವಿಧಾನಸೌಧಕ್ಕೆ ಪ್ರವೇಶ ನಿರ್ಬಂಧ

**ಸಂ.ಕ. ಸಮಾಚಾರ ಬೆಂಗಳೂರು**

ಕೊರೊನಾ ಸೋಂಕು ಹರಡುತ್ತಿರುವ ಹಿನ್ನೆಲೆಯಲ್ಲಿ ವಿಧಾನಸೌಧ, ವಿಕಾಸಸೌಧ ಹಾಗೂ ಬಹುಮಹಡಿ ಕಟ್ಟಡಗಳಿಗೆ ಮಧ್ಯಾಹ್ನ 3–30ರವರೆಗೆ ಸಾರ್ವಜನಿಕ ಪ್ರವೇಶವನ್ನು ಕಟ್ಟುನಿಟ್ಟಾಗಿ ನಿರ್ಬಂಧ ಹೇರಲಾಗಿದೆ. ಕಳೆದ ವಾರ ವಿಕಾಸಸೌಧದಲ್ಲಿ ಓರ್ವರಿಗೆ ಕೊರೊನಾ ಸೋಂಕು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ವಿಕಾಸಸೌಧವನ್ನು ಎರಡು ದಿನದ ಮಟ್ಟಿಗೆ ಸೀಲ್‌ಡೌನ್ ಮಾಡಲಾಗಿತ್ತು. ಹಾಗೆಯೇ ವಿಧಾನಸೌಧದಲ್ಲೂ ವಾರ್ತಾ ಇಲಾಖೆಯ ಅಧಿಕಾರಿಯೋರ್ವರಿಗೆ ಸೋಂಕು ಕಾಣಿಸಿಕೊಂಡಿದ್ದರಿಂದ ವಿಧಾನಸೌಧಕ್ಕೂ ಸ್ಯಾನಿಟೈಸ್ ಮಾಡಲಾಗಿತ್ತು. ಈ ವೇಳೆ ಸಿಬ್ಬಂದಿ. ಹಾಗೂ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲಾಗಿತ್ತು.



ಸೋಮವಾರದಿಂದ ವಿಧಾನಸೌಧಕ್ಕೆ ಸಾರ್ವಜನಿಕರ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಬೆಳಗ್ಗೆ ಕೂಡಾ ಸಾರ್ವಜನಿಕರು ತಮ್ಮ ಕೆಲಸ ಕಾರ್ಯಗಳಿಗೆ ವಿಧಾನಸೌಧ, ವಿಕಾಸಸೌಧ ಹಾಗೂ ಬಹುಮಹಡಿ ಕಟ್ಟಡಗಳಿಗೆ ಭೇಟಿ ನೀಡುತ್ತಿರುವುದರಿಂದ ಇದಕ್ಕೆ ಕಡಿವಾಣ ಹಾಕಲು ನಿರ್ಧರಿಸಿರುವ ಸರ್ಕಾರ ನಿಯಮಾವಳಿ ಪ್ರಕಾರ ಮಧ್ಯಾಹ್ನ 3ರ ನಂತರವೇ ಸಾರ್ವಜನಿಕರ ಭೇಟಿಗೆ ಅವಕಾಶ ಮಾಡಿಕೊಡಲಾಗಿದೆ. ಈಗ ಈ ವೇಳೆಯನ್ನು ಮಧ್ಯಾಹ್ನ 3–30ಕ್ಕೆ ನಿಗದಿ ಮಾಡಿ ಆದೇಶ ಹೊರಡಿಸಿದ್ದು, ಇದನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡುವಂತೆ ಭದ್ರತಾ ಸಿಬ್ಬಂದಿಗೆ ಸೂಚಿಸಲಾಗಿದೆ.